**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:-** ಶ್ರೀ ಜಿ.ಎ.ಜಯಪ್ರಕಾಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ಅಮಾನತ್ತನ್ನು ತೆರವುಗೊಳಿಸುವ ಬಗ್ಗೆ – ಆದೇಶ.

**ಓದಲಾಗಿದೆ:-**

1) ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 333 ಜಿಪಅ 2016 ದಿನಾಂಕ 28.10.2016

2) ಶ್ರೀ ಜಿ.ಎ.ಜಯಪ್ರಕಾಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ಮನವಿ ದಿನಾಂಕ 28.11.2016 ಮತ್ತು 11.01.2017

*****

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 28.10.2016ರ ಆದೇಶದಲ್ಲಿ ಸರ್ಕಾರವು ಶ್ರೀ ಜಿ.ಎ.ಜಯಪ್ರಕಾಶ್, ಸಹಾಯಕ ಕಾರ್ಯಪಾಲಕ ಇಂಜಿನೀಯರ್ ಇವರು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗ, ಹೊಸನಗರ ಇಲ್ಲಿ ಕರ್ತವ್ಯನಿರ್ವಹಿಸುತ್ತಿದ್ದಾಗ ಶ್ರೀ ಸುನೀಲ್, ಗುತ್ತಿಗೆದಾರರು ನಿರ್ವಹಿಸಿದ ಅಂಗನವಾಡಿ ಕಟ್ಟಡ ಕಾಮಗಾರಿಯ ಗುತ್ತಿಗೆ ಬಿಲ್ಲಿನ ಮೊತ್ತವನ್ನು ಪಾವತಿಸುವ ಸಂಬಂಧ ರೂ. 10,000/- ಗಳ ಅಕ್ರಮ ಸಂಭಾವನೆಯನ್ನು ಪಡೆದುಕೊಳ್ಳುತ್ತಿದ್ದ ಸಂದರ್ಭದಲ್ಲಿ ಸದರಿಯವರನ್ನು ಶಿವಮೊಗ್ಗ ಭ್ರಷ್ಟಾಚಾರ ನಿಗ್ರಹ ದಳವು ಟ್ರ್ಯಾಪ್ ಮಾಡಿ, ಈ ಸಂಬಂಧ ಭ್ರಷ್ಟಾಚಾರ ಪ್ರತಿಬಂಧಕ ಕಾಯ್ದೆ 1988ರ ಅಡಿ ಪ್ರಕರಣ ಸಂಖ್ಯೆ 3/2016ನ್ನು ದಾಖಲಾದ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಶಿವಮೊಗ್ಗ ಇವರು ಸಲ್ಲಿಸಿದ ವರದಿಯನ್ನಾಧರಿಸಿ ಅವರನ್ನು ಸೇವೆಯಿಂದ ಅಮಾನತ್ತುಗೊಳಿಸಲಾಗಿತ್ತು.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ 28.11.2016 ಮತ್ತು 11.01.2017 ರಂದು ಶ್ರೀ ಜಿ.ಎ.ಜಯಪ್ರಕಾಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಸಲ್ಲಿಸಿರುವ ಮನವಿಯಲ್ಲಿ ಸದರಿ ಪ್ರಕರಣದಲ್ಲಿ ತಮ್ಮದೇನೂ ತಪ್ಪಿಲ್ಲವೆಂದು, ಗುತ್ತಿಗೆದಾರರು ದುರುದ್ದೇಶದಿಂದ ಬಲವಂತವಾಗಿ ಹಣವನ್ನು ಇಟ್ಟು ಟ್ರ್ಯಾಪ್ ಮಾಡಿಸಿರುತ್ತಾರೆಂದು ತಿಳಿಸಿ, ತಮ್ಮ ಅಮಾನತ್ತನ್ನು ತೆರವುಗೊಳಿಸಿ ಸೇವೆಯಲ್ಲಿ ಪುನರ್ ಸ್ಥಾಪಿಸಿ ಸ್ಥಳನಿಯುಕ್ತಿಗೊಳಿಸುವಂತೆ ಕೋರಿರುತ್ತಾರೆ.

ಸರ್ಕಾರವು ಈ ಬಗ್ಗೆ ಕೂಲಂಕಷವಾಗಿ ಪರಿಶೀಲಿಸಿ ಶ್ರೀ ಜಿ.ಎ.ಜಯಪ್ರಕಾಶ್, ಸಹಾಯಕ ಕಾರ್ಯಪಾಲಕ ಇಂಜಿನೀಯರ್ ರವರನ್ನು ಸೇವೆಯಿಂದ ಅಮಾನತ್ತುಪಡಿಸಿ 6 ತಿಂಗಳಿಗೂ ಹೆಚ್ಚಿನ ಅವಧಿ ಗತಿಸಿದ್ದು, ಅವರ ವಿರುದ್ಧದ ಕಿಮಿನಲ್ ಮೊಕದ್ದಮೆ / ಇಲಾಖಾ ವಿಚಾರಣೆ ಕ್ರಮವನ್ನು ಬಾಕಿಯಿರಿಸಿ, ಅಮಾನತ್ತನ್ನು ತೆರವುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸಲು ನಿರ್ಧರಿಸಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ. ಗ್ರಾಅಪ 333 ಜಿಪಅ 2016, ಬೆಂಗಳೂರು,**
**ದಿನಾಂಕ 12.06.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಜಿ.ಎ.ಜಯಪ್ರಕಾಶ್, ಸಹಾಯಕ ಕಾರ್ಯಪಾಲಕ ಇಂಜಿನೀಯರ್ ಇವರ ವಿರುದ್ಧ ಭ್ರಷ್ಟಚಾರ ನಿಗ್ರಹ ದಳದಲ್ಲಿ

ಪು.ತಿ.ನೋ.

ದಾಖಲಾಗಿರುವ ಪ್ರಕರಣದಲ್ಲಿನ ಕ್ರಿಮಿನಲ್ / ಇಲಾಖಾ ವಿಚಾರಣೆ ಕ್ರಮವನ್ನು ಬಾಕಿಯಿಟ್ಟು ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತ್ತನ್ನು ತೆರವುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸಿ ಮುಂದಿನ ಆದೇಶದವರೆಗೆ ತಾಂತ್ರಿಕ ಸಹಾಯಕರು, ಯೋಜನಾ ವಿಭಾಗ, ಶಿಕಾರಿಪುರ ಇಲ್ಲಿನ ಖಾಲಿ ಹುದ್ದೆಗೆ ಸ್ಥಳನಿಯುಕ್ತಿಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್.ರಂಗನಗೌಡ), 12/06/2017
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
3. ಅಪರ ಪೋಲೀಸ್ ಮಹಾನಿರ್ದೇಶಕರು, ಭ್ರಷ್ಟಾಚಾರ ನಿಗ್ರಹ ದಳ, ಖನಿಜ ಭವನ, ಬೆಂಗಳೂರು
4. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು,
6. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
7. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಶಿವಮೊಗ್ಗ
9. ಸಂಬಂಧಪಟ್ಟ ಅಧಿಕಾರಿಗೆ.
10. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
11. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ)
12. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ) ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
13. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
14. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.